ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಎ.ಡಿ.ಎಂ2(2)/ಸ.ದಿ.ಆ.01/2019-20 ದಿನಾಂಕ:14/08/2019.

**-: ಜ್ಞಾಪನ :-**

ವಿಷಯ: ದಿನಾಂಕ.20/08/2019 ರ ಮಂಗಳವಾರ ರಾಜ್ಯದ ಎಲ್ಲಾ ಶಾಲೆಗಳಲ್ಲಿ "ಸದ್ಭಾವನಾ ದಿನ" ವನ್ನಾಗಿ ಆಚರಣೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿ ಸಿಆಸಿಇ (ರಾಜಕೀಯ) ರವರ ಸುತ್ತೋಲೆ ಸಂಖ್ಯೆ:ಸಿಆಸುಇ 01 ರಾಐಸ 2019 ದಿನಾಂಕ.26.07.2019.

*********

ವಿಷಯಕ್ಕೆ ಸಂಬಂದಿಸಿದಂತೆ ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ ಪ್ರತಿ ವರ್ಷ ಆಗಸ್ಟ್ 20 ರಂದು " ಸದ್ಭಾವನಾ ದಿನ " ಆಚರಿಸಲಾಗುತ್ತಿದೆ. ಆದ್ದರಿಂದ ಈ ಸಾಲಿನಲ್ಲಿಯೂ ಸಹ ದಿನಾಂಕ.20/08/2019 ರ ಮಂಗಳವಾರದಂದು ಆದರಂತೆ " ಸದ್ಭಾವನಾ ದಿನ " ವನ್ನು ರಾಜ್ಯಾದ್ಯಂತ ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದೆ. ಅದರಂತೆ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಮತ್ತು ಯೂತ್ ಅಸೋಸಿಯೇಷನ್ ಸಹಕಾರದೊಂದಿಗೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ ದಿನಾಂಕ.20/08/2019 ರ ಮಂಗಳವಾರದಂದು " ಸದ್ಭಾವನಾ ದಿನ "ವನ್ನು ಪ್ರತಿಜ್ಞೆ ಮಾಡುವುದರ ಮೂಲಕ ಆಚರಿಸಲು ಸೂಕ್ತ ಕ್ರಮ ವಹಿಸಲು ಸೂಚಿಸಿದೆ. ಕಾರ್ಯಕ್ರಮ ನಡೆಸಿದ ಬಗ್ಗೆ ವರದಿಯನ್ನು ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**(ಪ್ರತಿಜ್ಞಾ ವಿಧಿಯನ್ನು ಇದರೊಂದಿಗೆ ಲಗತ್ತಿಸಿದೆ)**

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

**ಗೆ,**

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ

2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರುಗಳ ಮುಖಾಂತರ)

**ಪ್ರತಿಯನ್ನು**

1) ಅಪರ ಆಯುಕ್ತರು ,ಕಲಬುರಗಿ/ಧಾರವಾಡ ಆಯುಕ್ತಾಲಯ ಇವರಿಗೆ ಅಗತ್ಯ ಕ್ರಮಕ್ಕಾಗಿ

# ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲಾ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.